**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 344/2014**

**ಸಾಕ್ಷಿಗೆ ದಿನಾಂಕ 23.4.2025 ರಂದು ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಗುರುಪ್ರಸಾದ್ ಕೆ ಎಸ್ | ಪಿ.ಡಬ್ಲ್ಯೂ-8 |
| ತಂದೆಯ/ಗಂಡನ ಹೆಸರು | : | ಲೇಟ್ ಕೆ.ಜಿ.ಸಿದ್ದನಂಜಪ್ಪ | ಸಿ.ಡಬ್ಲ್ಯೂ-20 |
| ವಯಸ್ಸು | : | 73 | |
| ಉದ್ಯೋಗ | : | ನಿವೃತ್ತ ಸಹಾಯಕ ಸಹಕಾರ ಸಂಘಗಳ ನಿಬಂಧಕರು | |
| ವಾಸಸ್ಥಳ | : | ಮಳವಳ್ಳಿ | |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನಾನು 2007 ರಿಂದ 2012 ರವರೆಗೆ ಮೈಸೂರಿನ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಲೇವಾದೇವಿ ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಮೈಸೂರು ಉಪ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ. ಸಹಾಕಾರ ಸಂಘಗಳ ಉಪ ನಿಬಂಧಕರು, ಮೈಸೂರು ಜಿಲ್ಲೆ ಇವರು ದಿನಾಂಕ 8.10.2007 ರಂದು ನನ್ನನ್ನು ಹೆಚ್.ಡಿ.ಕೋಟೆಯ ಲ್ಯಾಂಪ್ಸ ಸೊಸೈಟಿಯಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ವಿಚಾರಣೆ ಮಾಡಲು ಸಹಕಾರ ಸಂಘಗಳ ಕಾಯ್ದೆ ಕಲಂ64 ರಡಿಯಲ್ಲಿ ನನ್ನನ್ನು ವಿಚಾರಣಾಧಿಕಾರಿಯಾಗಿ ನೇಮಕ ಮಾಡಿರುತ್ತಾರೆ. ಸದರಿ ಆದೇಶದ ಪ್ರಕಾರ ನಾನು ಸಂಘದಲ್ಲಿ ಲಭ್ಯವಿದ್ದ ದಾಖಲೆಗಳನ್ನು ನಾನು ಸಂಘಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿ ಸಂಬಂಧಿಸಿದವರ ಹೇಳಿಕೆಗಳನ್ನು ಪಡೆದುಕೊಂಡು ವಿಚಾರಣೆ ಮಾಡಿ ಸಹಕಾರ ಸಂಘಗಳ ಉಪ ನಿಬಂಧಕರು, ಮೈಸೂರು ಇವರಿಗೆ 2009 ರಲ್ಲಿ ವರದಿಯನ್ನು ನೀಡಿರುತ್ತೇನೆ.

ಈ ಹಂತದಲ್ಲಿ ಕಡತದಲ್ಲಿ ವಿಚಾರಣಾ ವರದಿ ಲಭ್ಯವಿಲ್ಲದಿರುವುದರಿಂದ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,
ಹೆಚ್.ಡಿ.ಕೋಟೆ